# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 377(322) |
| ಸದಸ್ಯರ ಹೆಸರು : | ಶ್ರೀ ಕೆ.ಎ.ತಿಪ್ಪೇಸ್ವಾಮಿ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ : | 14-09-2022 |
| ಉತ್ತರಿಸಬೇಕಾದ ಸಚಿವರು : | ಮಾನ್ಯ ಕಂದಾಯ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಮನಗರ ಜಿಲ್ಲೆ, ಚನ್ನಪಟ್ಟಣ ತಾಲ್ಲೂಕು, ಕಸಬಾ ಹೋಬಳಿ ವ್ಯಾಪ್ತಿಯಲ್ಲಿ ಬರುವ ಲಾಳಘಟ್ಟ ಗ್ರಾಮದ ಸರ್ವೆ ನಂ:12/1, 12/5, 12/6 ಮತ್ತು 12/8 ರಲ್ಲಿ ಒಟ್ಟು 0-18 ಗುಂಟೆ ಜಮೀನನ್ನು ಕೆಂಚಯ್ಯನದೊಡ್ಡಿ ಗ್ರಾಮದ ಇತರೆ ಜನಾಂಗದ ಸ್ಮಶಾನಕ್ಕಾಗಿ ಭೂಸ್ವಾಧೀನ ಪಡಿಸಿಕೊಳ್ಳಲು ಸರ್ಕಾರದ ಆದೇಶ ಹೊರಡಿಸಿ ರಾಜ್ಯ ಪತ್ರದಲ್ಲಿ ಪ್ರಕಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪೂರ್ಣ ಮಾಹಿತಿ ನೀಡುವುದು ; | ಹೌದು.<br><br>ಸದರಿ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಭೂಸ್ವಾಧೀನ ಕಾಯ್ದೆ-2013ರ ಕಲಂ-11(1)ರಡಿ ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಸದರಿ ಅಧಿಸೂಚನೆಯನ್ನು ದಿನಾಂಕ:11.02.2022 ರಂದು ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. |
| ಆ) | ಕೂಡಲೇ ಸಾರ್ವಜನಿಕರಿಗೆ ಸ್ಮಶಾನ ಉಪಯೋಗಕ್ಕೆ ಭೂಮಿಯನ್ನು ಹಸ್ತಾಂತರಿಸಿ, ಸಾರ್ವಜನಿಕರಿಗೆ ಹಾಗೂ ಸ್ಥಳೀಯರಿಗೆ ಇದರಿಂದ ಆಗುವ ಅನಾನುಕೂಲವನ್ನು ಬಗೆಹರಿಸಲು ತೆಗೆದುಕೊಂಡಿರುವ ಕ್ರಮಗಳೇನು ; | ಸ್ಮಶಾನದ ಉದ್ದೇಶಕ್ಕಾಗಿ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಕಲಂ 11(1)ರಡಿ ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿದ್ದು ಸ್ಥಳಿಯ ದಿನ ಪತ್ರಿಕೆಯಾದ ರೇಷ್ಮೆ ಸೀಮೆ ಹಾಗೂ ಜಯವಾಹಿನಿ ಪತ್ರಿಕೆಗಳಲ್ಲಿ ದಿನಾಂಕ:22.02.2022 ರಂದು ಪ್ರಕಟಣೆಗೊಂಡಿರುತ್ತದೆ.<br><br>ಕಲಂ-15(3) ರಡಿ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಿದ್ದಲ್ಲಿ ನಿಯಮಾನುಸಾರ ಪರಿಶೀಲಿಸಿ ಅನುಮತಿ ನೀಡಲಾಗುವುದು. ಮುಂದುವರೆದು ಕಲಂ 19(1)ರಡಿ ಅಂತಿಮ ಅಧಿಸೂಚನೆಗೆ ಪ್ರಸ್ತಾವನೆ ಸಲ್ಲಿಸಿದ್ದಲ್ಲಿ ಪರಿಶೀಲಿಸಿ ಅಂತಿಮ ಅಧಿಸೂಚನೆಗೆ ಅನುಮೋದನೆ ನೀಡಲು ಕ್ರಮವಹಿಸಲಾಗುವುದು.<br><br>ಭೂಸ್ವಾಧೀನ ಕಾಯ್ದೆ-2013ರ ಕಲಂ-11(1) ರಡಿ ಪ್ರಾಥಮಿಕ ಅಧಿಸೂಚನೆ ಪ್ರಕಟಗೊಂಡ ನಂತರ 19(1) ರಡಿ ಅಂತಿಮ ಅಧಿಸೂಚನೆ ಹೊರಡಿಸಲು ಒಂದು ವರ್ಷ ಕಾಲಾವಕಾಶವಿರುತ್ತದೆ. |
| ಇ) | ರಾಜ್ಯ ಪತ್ರದಲ್ಲಿ ಪ್ರಕಟಿಸಿರುವಂತೆ ಈ ಮೇಲಿನ ಸರ್ವೆ ನಂಬರ್‌ಗಳ ಜಮೀನನ್ನು ಸ್ವಾಧೀನಪಡಿಸಿಕೊಂಡು ಕೆಂಚಯ್ಯನದೊಡ್ಡಿ ಗ್ರಾಮದ ಗ್ರಾಮಸ್ಥರಿಗೆ ಸ್ಮಶಾನಕ್ಕಾಗಿ ಭೂಸ್ವಾಧೀನಪಡಿಸಿಕೊಳ್ಳಲು ಸರ್ಕಾರವು ಯಾವ ಕಾಲಮಿತಿಯನ್ನು ನಿಗಧಿಪಡಿಸಿದೆ? (ಸಂಪೂರ್ಣ ವಿವರ ನೀಡುವುದು) | |

**ಸಂಖ್ಯೆ: ಆರ್.ಡಿ 13 ಎಕ್ಯೂಜಿಆರ್ 2022**

(ಆರ್.ಅಶೋಕ)
ಕಂದಾಯ ಸಚಿವರು